**All India Radio: Bangalore**
**National Bulletin In Kannada**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**09.05.2026 19.35 hrs**

**<>><><*><><<>**

ಮುಖ್ಯಾಂಶಗಳು

**೧.ತಮಿಳುನಾಡಿನಲ್ಲಿ ಟಿವಿಕೆ ಪಕ್ಷಕ್ಕೆ ವಿಸಿಕೆ, ಐಯುಎಂಎಲ್ ಬೆಂಬಲ; ಸರ್ಕಾರ ರಚನೆ ಹಾದಿ ಸುಗಮ**

**೨.ಕರ್ನಾಟಕ, ತೆಲಂಗಾಣಕ್ಕೆ ನಾಳೆ ಪ್ರಧಾನಿ ನರೇಂದ್ರ ಮೋದಿ ಭೇಟಿ; ವಿವಿಧ ಕಾರ್ಯಕ್ರಮಗಳಲ್ಲಿ ಭಾಗಿ**

**೩.ಕರ್ನಾಟಕದ ಆರು ಸೇರಿ ದೇಶದ ೪೨ ಪಂಚಾಯಿತಿಗಳಿಗೆ ರಾಷ್ಟ್ರೀಯ ಪಂಚಾಯತ್ ಪ್ರಶಸ್ತಿ ಗರಿ**

**೪.ಡಿಆರ್‌ಡಿಒ ದಿಂದ ಸುಧಾರಿತ ಅಗ್ನಿ ಕ್ಷಿಪಣಿ ಪರೀಕ್ಷಾರ್ಥ ಹಾರಾಟ ಯಶಸ್ವಿ**

**೫.ಐಪಿಎಲ್ ಟಿ-೨೦ ಕ್ರಿಕೆಟ್; ಗುಜರಾತ್ ಟೈಟನ್ಸ್ ವಿರುದ್ಧ ಟಾಸ್ ಗೆದ್ದ ರಾಜಸ್ತಾನ್ ರಾಯಲ್ಸ್ ಫೀಲ್ಡಿಂಗ್ ಆಯ್ಕೆ**

**<>><><*><><<>**

ತಮಿಳುನಾಡಿನಲ್ಲಿ ನಟ ಸಿ.ಜೋಸೆಫ್ ವಿಜಯ್ ನೇತೃತ್ವದ ಟಿವಿಕೆ ಪಕ್ಷ ರಾಜ್ಯದಲ್ಲಿ ನೂತನ ಸರ್ಕಾರ ರಚಿಸಲು ೧೨೦ ಶಾಸಕರ ಬೆಂಬಲವನ್ನು ಪಡೆದಿದೆ. ಸರ್ಕಾರ ರಚನೆಗೆ ವಿಸಿಕೆ ಮತ್ತು ಐಯುಎಂಎಲ್ ಎರಡೂ ಪಕ್ಷಗಳು ಬೇಷರತ್ ಬೆಂಬಲ ನೀಡಿವೆ ಎಂದು ಟಿವಿಕೆ ತಿಳಿಸಿದೆ. ಚೆನ್ನೈನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಟಿವಿಕೆ ನಾಯಕ ಅಧವ್ ಅರ್ಜುನ್, ಟಿವಿಕೆ ಪಕ್ಷಕ್ಕೆ ವಿದುತಲೈ ಚಿರುತೈಗಲ್ ಕಚ್ಚಿ-ವಿಸಿಕೆ ಬೆಂಬಲ ನೀಡಿದೆ. ಇಂಡಿಯನ್ ಯೂನಿಯನ್ ಮುಸ್ಲಿಂ ಲೀಗ್-ಐಯುಎಂಎಲ್ ಕೂಡ ಪಕ್ಷಕ್ಕೆ ತನ್ನ ಬೆಂಬಲವನ್ನು ಖಚಿತಪಡಿಸಿದೆ ಎಂದು ತಿಳಿಸಿದ್ದಾರೆ. ಇತ್ತೀಚೆಗೆ ನಡೆದ ವಿಧಾನಸಭಾ ಚುನಾವಣೆಯಲ್ಲಿ ೧೦೮ ಸ್ಥಾನಗಳನ್ನು ಗೆದ್ದ ನಂತರ ಏಕೈಕ ಅತಿದೊಡ್ಡ ಪಕ್ಷವಾಗಿ ಟಿವಿಕೆ ಹೊರಹೊಮ್ಮಿದೆ. ಐದು ಶಾಸಕರನ್ನು ಹೊಂದಿರುವ ಕಾಂಗ್ರೆಸ್ ಮತ್ತು ತಲಾ ಇಬ್ಬರು ಶಾಸಕರನ್ನು ಹೊಂದಿರುವ ಸಿಪಿಐ, ಸಿಪಿಐಎಂ, ವಿಸಿಕೆ ಮತ್ತು ಐಯುಎಂಎಲ್ ಸೇರಿದಂತೆ ಬೆಂಬಲಿತ ಪಕ್ಷಗಳ ಒಟ್ಟು ಬಲ ೧೩ ಆಗಿದೆ.

**<>><><*><><<>**

ಬಿಜೆಪಿ ಶಾಸಕಾಂಗ ಪಕ್ಷದ ನಾಯಕ ಸುವೇಂದು ಅಧಿಕಾರಿ ಇಂದು ಪಶ್ಚಿಮ ಬಂಗಾಳದ ಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸಿದರು. ಈ ಮೂಲಕ ರಾಜ್ಯದ ಮೊದಲ ಬಿಜೆಪಿ ಸರ್ಕಾರದ ನೇತೃತ್ವ ವಹಿಸಿದರು. ಕೋಲ್ಕತ್ತಾದ ಬ್ರಿಗೇಡ್ ಪೆರೇಡ್ ಮೈದಾನದಲ್ಲಿ ನಡೆದ ಸಮಾರಂಭದಲ್ಲಿ ರಾಜ್ಯಪಾಲ ಆರ್.ಎನ್.ರವಿ ಅವರು ಸುವೇಂದು ಅವರಿಗೆ ಅಧಿಕಾರ ಮತ್ತು ಗೌಪ್ಯತೆಯ ಪ್ರಮಾಣ ವಚನ

ಬೋಧಿಸಿದರು. ಇದೇ ವೇಳೆ ಐದು ಸಂಪುಟ ಸಚಿವರು ಸಹ ಪ್ರಮಾಣ ವಚನ ಸ್ವೀಕರಿಸಿದರು. ಸಚಿವರಾದ ದಿಲೀಪ್ ಘೋಷ್, ಅಗ್ನಿಮಿತ್ರ ಪಾಲ್, ಅಶೋಕ್ ಕೀರ್ತಾನಿಯಾ, ನಿಸಿತ್ ಪ್ರಾಮಾಣಿಕ್ ಮತ್ತು ಕ್ಷುದಿರಾಮ್ ತುಡು ಅವರಿಗೆ ರಾಜ್ಯಪಾಲರು ಅಧಿಕಾರ ಮತ್ತು ಗೌಪ್ಯತೆಯ ಪ್ರಮಾಣ ವಚನ ಬೋಧಿಸಿದರು. ಪಶ್ಚಿಮ ಬಂಗಾಳ ವಿಧಾನಸಭೆಯ ಹೊಸದಾಗಿ ಆಯ್ಕೆಯಾದ ಶಾಸಕರು, ಮೇ ೧೩ ರಂದು ಪ್ರಮಾಣ ವಚನ ಸ್ವೀಕರಿಸಲಿದ್ದಾರೆ. ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಶಾ, ರಕ್ಷಣಾ ಸಚಿವ ರಾಜನಾಥ್ ಸಿಂಗ್, ಬಿಜೆಪಿ ಆಡಳಿತದ ರಾಜ್ಯಗಳ ಮುಖ್ಯಮಂತ್ರಿಗಳು, ಬಿಜೆಪಿ ಅಧ್ಯಕ್ಷ ನಿತಿನ್ ನಬಿನ್ ಸೇರಿದಂತೆ ಎನ್‌ಡಿಎ ನಾಯಕರು ಪ್ರಮಾಣ ವಚನ ಸ್ವೀಕಾರ ಸಮಾರಂಭದಲ್ಲಿ ಉಪಸ್ಥಿತರಿದ್ದರು. ೨೦೨೬ ರ ಪಶ್ಚಿಮ ಬಂಗಾಳ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ ೨೦೭ ಸ್ಥಾನಗಳನ್ನು ಗೆದ್ದಿದ್ದರೆ, ೧೫ ವರ್ಷಗಳ ಕಾಲ ರಾಜ್ಯವನ್ನು ಆಳಿದ ನಂತರ ತೃಣಮೂಲ ಕಾಂಗ್ರೆಸ್ ೮೦ ಸ್ಥಾನಗಳನ್ನು ಗಳಿಸಿದೆ.

<>><><*><><<>

ಪ್ರಧಾನಿ ನರೇಂದ್ರ ಮೋದಿ ಅವರು, ನಾಳೆ ಕರ್ನಾಟಕ ಮತ್ತು ತೆಲಂಗಾಣಕ್ಕೆ ಭೇಟಿ ನೀಡಲಿದ್ದಾರೆ. ನಾಳೆ ಬೆಳಗ್ಗೆ ೧೧ ಗಂಟೆ ಸುಮಾರಿಗೆ ಬೆಂಗಳೂರಿನಲ್ಲಿ ನಡೆಯಲಿರುವ ಆರ್ಟ್ ಆಫ್ ಲೀವಿಂಗ್‌ನ ೪೫ನೇ ವಾಷಿಕೋತ್ಸವದಲ್ಲಿ ಭಾಗವಹಿಸಲಿದ್ದಾರೆ. ಇದೇ ವೇಳೆ ಆರ್ಟ್ ಆಫ್ ಲೀವಿಂಗ್ ಅಂತಾರಾಷ್ಟ್ರೀಯ ಕೇಂದ್ರದಲ್ಲಿ ಹೊಸದಾಗಿ ನಿರ್ಮಿಸಲಾದ ಧ್ಯಾನ ಮಂದಿರವನ್ನು ಉದ್ಘಾಟಿಸಲಿದ್ದಾರೆ. ಈ ಸಂದರ್ಭದಲ್ಲಿ ಕಾರ್ಯಕ್ರಮ ಉದ್ದೇಶಿಸಿ, ಪ್ರಧಾನಿ ಮಾತನಾಡಲಿದ್ದಾರೆ. ಬಳಿಕ ಅವರು, ಹೈದರಾಬಾದ್‌ಗೆ ಪ್ರಯಾಣಿಸಲಿದ್ದಾರೆ. ಮಧ್ಯಾಹ್ನ ೩ ಗಂಟೆ ಸುಮಾರಿಗೆ ಹೈದರಾಬಾದ್‌ನಲ್ಲಿ ೯ ಸಾವಿರದ ೪೦೦ ಕೋಟಿ ರೂಪಾಯಿ ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಶಂಕುಸ್ಥಾಪನೆ ಮತ್ತು ಉದ್ಘಾಟನೆ ನೆರವೇರಿಸಲಿದ್ದಾರೆ. ಹೈದರಾಬಾದ್-ಪಣಜಿ ಆರ್ಥಿಕ ಕಾರಿಡಾರ್‌ನಲ್ಲಿ ಗುಡೆಬೆಳ್ಳೂರಿನಿಂದ ಮೆಹಬೂಬ್‌ನಗರ್ ವರೆಗಿನ ರಾಷ್ಟ್ರೀಯ ಹೆದ್ದಾರಿ ೧೬೭ ರ ಚತುಷ್ಪಥ ಯೋಜನೆಗೆ ಅವರು ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ಇದರ ಒಟ್ಟು ಯೋಜನಾ ವೆಚ್ಚ ೩ ಸಾವಿರದ ೧೭೫ ಕೋಟಿ ರೂಪಾಯಿ ಆಗಿದೆ. ಹೈದರಾಬಾದ್‌ನಲ್ಲಿ ಅತ್ಯಾಧುನಿಕ ಕ್ಯಾನ್ಸರ್ ನಿವಾರಣಾ ಮಲ್ಟಿ ಸ್ಪೆಷಾಲಿಟಿ ಸಿಂಧು ಆಸ್ಪತ್ರೆಯನ್ನು ಲೋಕಾರ್ಪಣೆಗೊಳಿಸಲಿದ್ದಾರೆ. ನಂತರ ಪ್ರಧಾನಿ ಅವರು ವಾರಂಗಲ್‌ನಲ್ಲಿ ಪಿಎಂ ಮಿತ್ರಾ ಪಾರ್ಕ್ ಉದ್ಘಾಟಿಸಲಿದ್ದಾರೆ.

<>><><*><><<>

ಕೇಂದ್ರ ಸರ್ಕಾರ, ರಾಷ್ಟ್ರೀಯ ಪಂಚಾಯತ್ ಪ್ರಶಸ್ತಿ ೨೦೨೫ ಅನ್ನು ಘೋಷಿಸಿದ್ದು, ದೇಶದಾದ್ಯಂತದ ೪೨ ಪಂಚಾಯತ್‌ಗಳನ್ನು ಈ ಗೌರವಕ್ಕೆ ಆಯ್ಕೆ ಮಾಡಲಾಗಿದೆ. ಕರ್ನಾಟಕದ ಆರು ಪಂಚಾಯತಿಗಳು ಆಯ್ಕೆಯಾಗುವ ಮೂಲಕ ಅತ್ಯಧಿಕ ಪ್ರಶಸ್ತಿ ಪಡೆದ ರಾಜ್ಯವಾಗಿದೆ. ಆಂಧ್ರ ಪ್ರದೇಶ ಮತ್ತು ಒಡಿಶಾ ತಲಾ ಐದು ಪ್ರಶಸ್ತಿಗಳನ್ನು ಪಡೆದು ನಂತರದ ಸ್ಥಾನದಲ್ಲಿವೆ. ಪ್ರಶಸ್ತಿ ವಿತರಣಾ ಸಮಾರಂಭ ಮುಂದಿನ ತಿಂಗಳ ೩ರಂದು ನವದೆಹಲಿಯಲ್ಲಿ ನಡೆಯಲಿದೆ ಎಂದು ಕೇಂದ್ರ ಪಂಚಾಯತ್ ರಾಜ್ ಸಚಿವಾಲಯ ತಿಳಿಸಿದೆ. ಈ

ಪ್ರಶಸ್ತಿಗಳನ್ನು ಎರಡು ವಿಭಾಗಗಳಡಿ ಪ್ರದಾನ ಮಾಡಲಾಗುತ್ತಿದೆ. ದೀನ್ ದಯಾಳ್ ಉಪಾಧ್ಯಾಯ ಪಂಚಾಯತ್ ಸತತ ಅಭಿವೃದ್ಧಿ ಪುರಸ್ಕಾರ ಮತ್ತು ನಾನಾಜಿ ದೇಶ್‌ಮುಖ್ ಸರ್ವೋತ್ತಮ ಪಂಚಾಯತ್ ಸತತ ಅಭಿವೃದ್ಧಿ ಪುರಸ್ಕಾರ ಪ್ರದಾನ ಮಾಡಲಾಗುತ್ತದೆ. ಜೀವನೋಪಾಯ, ಆರೋಗ್ಯ, ಸಮರ್ಪಕ ನೀರಿನ ಲಭ್ಯತೆ, ಸ್ವಚ್ಛತೆ, ಮಹಿಳಾ ಸ್ನೇಹಿ ಆಡಳಿತ ಮತ್ತು ಸಾಮಾಜಿಕ ನ್ಯಾಯ ಸೇರಿದಂತೆ ಸ್ಥಿರ ಅಭಿವೃದ್ಧಿ ಗುರಿಗಳೊಂದಿಗೆ ಸಂಬಂಧಿಸಿದ ವಿವಿಧ ಕ್ಷೇತ್ರಗಳಲ್ಲಿ ಉತ್ತಮ ಸಾಧನೆ ಮಾಡಿದ ಗ್ರಾಮ ಪಂಚಾಯತ್‌ಗಳನ್ನು ಗೌರವಿಸಲಾಗುತ್ತದೆ. ಈ ವಿಭಾಗದಡಿ ೧೭ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ೩೪ ಗ್ರಾಮ ಪಂಚಾಯತ್‌ಗಳನ್ನು ಆಯ್ಕೆ ಮಾಡಲಾಗಿದೆ.

**<>><><*><><<>**

ಒಡಿಶಾದ ಡಾ. ಎ.ಪಿ.ಜೆ ಅಬ್ದುಲ್ ಕಲಾಂ ದ್ವೀಪದಿಂದ ಮಲ್ಟಿಪಲ್ ಇಂಡಿಪೆಂಡೆಂಟ್ಲಿ ಟಾರ್ಗೆಟೆಡ್ ರೀ-ಎಂಟ್ರಿ ವೆಹಿಕಲ್- ಎಮ್‌ಐಆರ್‌ವಿ, ವ್ಯವಸ್ಥೆಯೊಂದಿಗೆ ಸುಧಾರಿತ ಅಗ್ನಿ ಕ್ಷಿಪಣಿಯ ಪರಿಕ್ಷಾರ್ಥ ಹಾರಾಟವನ್ನು ಭಾರತ ಯಶಸ್ವಿಯಾಗಿ ನಡೆಸಿದೆ. ಕ್ಷಿಪಣಿಯನ್ನು ಬಹು ಪೇಲೋಡ್‌ಗಳೊಂದಿಗೆ ಹಾರಾಟ ಪರೀಕ್ಷೆಗೆ ಒಳಪಡಿಸಲಾಗಿದೆ ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ. MIRV ಸಾಮರ್ಥ್ಯದೊಂದಿಗೆ ಅಗ್ನಿ ಕ್ಷಿಪಣಿಯ ಯಶಸ್ವಿ ಹಾರಾಟ ಪರೀಕ್ಷೆಗಾಗಿ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು, DRDO, ಭಾರತೀಯ ಸೇನೆ ಮತ್ತು  ಸಂಬಂಧಿತ ಕೈಗಾರಿಕೆಗಳನ್ನು ಶ್ಲಾಘಿಸಿದ್ದಾರೆ. ಬೆಳೆಯುತ್ತಿರುವ ಬೆದರಿಕೆಗಳ ವಿರುದ್ಧ ದೇಶದ ರಕ್ಷಣಾ ಸನ್ನದ್ಧತೆಗೆ ಇದು ಅದ್ಭುತ ಸಾಮರ್ಥ್ಯ ಸೇರ್ಪಡೆಯಾಗಿದೆ ಎಂದು ಸಚಿವರು ಹೇಳಿದ್ದಾರೆ.

**<>><><*><><<>**

ಹ್ಯಾಂಪ್ಟನ್ ಸ್ಕೈ ರಿಯಾಲಿಟಿ ಲಿಮಿಟೆಡ್‌ಗೆ ಸಂಬಂಧಪಟ್ಟ ಅಕ್ರಮ ಹಣ ವರ್ಗಾವಣೆ ಪ್ರಕರಣಕ್ಕೆ ಸಂಬಂಧಿಸಿದಂತೆ ಜಾರಿ ನಿರ್ದೇಶನಾಲಯ ಇಂದು ಪಂಜಾಬ್ ಸಚಿವ ಸಂಜೀವ್ ಅರೋರಾ ಅವರನ್ನು ಬಂಧಿಸಿದೆ. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಈ ಹಿಂದೆ ದೆಹಲಿ, ಗುರುಗ್ರಾಮ ಮತ್ತು ಚಂಡೀಗಢದ ಐದು ಸ್ಥಳಗಳಲ್ಲಿ ಇಡಿ ಶೋಧ ಕಾರ್ಯಾಚರಣೆ ನಡೆಸಿತ್ತು. ನೂರು ಕೋಟಿ ರೂಪಾಯಿಗಳಿಗಿಂತ ಹೆಚ್ಚು ಮೌಲ್ಯದ ಮೊಬೈಲ್ ಫೋನ್‌ಗಳ ನಕಲಿ ಜಿಎಸ್‌ಟಿ ಖರೀದಿ ಹಾಗೂ ದುಬೈನಿಂದ ಭಾರತಕ್ಕೆ ದೊಡ್ಡ ಪ್ರಮಾಣದ ಅಕ್ರಮ ಹಣ ವರ್ಗಾವಣೆ ಆರೋಪಕ್ಕೆ ಸಂಬಂಧಿಸಿದಂತೆ ಸಂಜೀವ್ ಅರೋರಾ ಅವರನ್ನು ಬಂಧಿಸಲಾಗಿದೆ ಎಂದು ಇಡಿ ತಿಳಿಸಿದೆ.

**<>><><*><><<>**

ಪ್ರಧಾನಮಂತ್ರಿ ಗ್ರಾಮ್ ಸಡಕ್ ಯೋಜನೆಗೆ ೨೫ ವರ್ಷಗಳ ಸಂದ ಹಿನ್ನೆಲೆಯಲ್ಲಿ ಬೆಳ್ಳಿ ಮಹೋತ್ಸವ ಆಚರಣೆ ಮತ್ತು ಪಿಎಂಜಿಎಸ್‌ವೈ-೪ ರ ಉದ್ಘಾಟನೆಯು ಮಧ್ಯಪ್ರದೇಶದ ಸೆಹೋರ್ ಜಿಲ್ಲೆಯ ಭೈರುಂಡಾದಲ್ಲಿ ನಾಳೆ ನಡೆಯಲಿದೆ. ಕೇಂದ್ರ ಗ್ರಾಮೀಣಾಭಿವೃದ್ಧಿ ಸಚಿವ ಶಿವರಾಜ್ ಸಿಂಗ್ ಚೌಹಾಣ್

ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ.  ಈ ಸಂದರ್ಭದಲ್ಲಿ ಅವರು, ಮಧ್ಯಪ್ರದೇಶದಲ್ಲಿ ಒಟ್ಟು ೨ ಸಾವಿರ ೧೦೦ ಕಿಲೋಮೀಟರ್ ಉದ್ದದ ೯೭೩ ರಸ್ತೆಗಳಿಗೆ ಅನುಮೋದನೆ ಪತ್ರ ಮತ್ತು ಪಿಎಂಜಿಎಸ್‌ವೈ-೪ ಅಡಿಯಲ್ಲಿ ಹಣಕಾಸು ಹಂಚಿಕೆಗಳನ್ನು ಮಧ್ಯಪ್ರದೇಶ ಮುಖ್ಯಮಂತ್ರಿ ಡಾ.ಮೋಹನ್ ಯಾದವ್ ಅವರಿಗೆ ಹಸ್ತಾಂತರಿಸಲಿದ್ದಾರೆ.

<>><><*><><<>

ದೇಶಾದ್ಯಂತ ೨೦೨೬ರ ಎರಡನೇ ರಾಷ್ಟ್ರೀಯ ಲೋಕ್ ಅದಾಲತ್ ಆಯೋಜಿಸಲಾಗಿದೆ. ಈ ಕುರಿತು ಮಾಹಿತಿ ನೀಡಿದ ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಸಂಜೀವ್ ಪಾಂಡೆ, ಈ ಉಪಕ್ರಮವು ವಿವಾದಗಳನ್ನು ಸೌಹರ್ದಯುತವಾಗಿ ಇತ್ಯರ್ಥಪಡಿಸಲು ಮತ್ತು ಜನಕೇಂದ್ರಿತ ಕಾರ್ಯವಿಧಾನಗಳ ಮೂಲಕ ನ್ಯಾಯಾಲಯಗಳ ಮೇಲಿನ ಹೊರೆ ಕಡಿಮೆ ಮಾಡುವ ಗುರಿ ಹೊಂದಿದೆ ಎಂದು ಹೇಳಿದರು.

<>><><*><><<>

ಜೈಪುರದ ಸವಾಯ್ ಮಾನ್‌ಸಿಂಗ್ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ರಾಜಸ್ತಾನ್ ರಾಯಲ್ಸ್ ಹಾಗೂ ಗುಜರಾತ್ ಟೈಟನ್ಸ್ ತಂಡಗಳು ಮುಖಾಮುಖಿಯಾಗಿವೆ. ಟಾಸ್ ಗೆದ್ದ ರಾಜಸ್ತಾನ್ ರಾಯಲ್ಸ್ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

<>><><*><><<>

ಚೀನಾದ ಶಾಂಘೈನಲ್ಲಿ ಇಂದು ನಡೆದ ಆರ್ಚರಿ ವಿಶ್ವಕಪ್ ೨೦೨೬ ರ ಹಂತ ೨ರ ಪುರುಷರ ವೈಯಕ್ತಿಕ ಕಾಂಪೌಂಡ್ ಸ್ಪರ್ಧೆಯಲ್ಲಿ ಸಾಹಿಲ್ ಜಾಧವ್ ಕಂಚಿನ ಪದಕ ಗೆದ್ದಿದ್ದಾರೆ. ೨೫ ವರ್ಷದ ಮಹಾರಾಷ್ಟ್ರದ ಸಾಹಿಲ್ ಜಾಧವ್, ಡೆನ್ಮಾರ್ಕ್‌ನ ಅನುಭವಿ ಆಟಗಾರ ಮಾರ್ಟಿನ್ ಡ್ಯಾಮ್ಸ್‌ಬೊ ಅವರನ್ನು ೧೪೭-೧೪೪ ಅಂತರದಿಂದ ಸೋಲಿಸಿ, ಪ್ಲೇಆಫ್‌ನಲ್ಲಿ ಭಾರತಕ್ಕೆ ಮೊದಲ ಪದಕ ತಂದುಕೊಟ್ಟರು. ಕಳೆದ ವರ್ಷ ಶಾಂಘೈನಲ್ಲಿ ಭಾರತ ಐದು ಕಾಂಪೌಂಡ್ ಪದಕಗಳನ್ನು ಗೆದ್ದಿತ್ತು. ಭಾನುವಾರ ಭಾರತ ಮಹಿಳಾ ತಂಡ ಚಿನ್ನಕ್ಕಾಗಿ ಸ್ಪರ್ಧಿಸಲಿದ್ದು, ಸಿಮ್ರನ್‌ಜೀತ್ ಕೌರ್ ತನ್ನ ಚೊಚ್ಚಲ ವಿಶ್ವಕಪ್ ಪದಕವನ್ನು ಖಚಿತಪಡಿಸಿಕೊಳ್ಳಲು ಒಂದು ಗೆಲುವು ಸಾಧಿಸುವ ಅಗತ್ಯವಿದೆ. ಸೆಮಿಫೈನಲ್‌ನಿಂದ ಅವರು ತಮ್ಮ ಅಭಿಯಾನವನ್ನು ಪ್ರಾರಂಭಿಸಲಿದ್ದಾರೆ.

**<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>**

**<>><>< ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ  ><><<>**